ಬೆಂಗಳೂರು
ನಗರ ವಿಶ್ವವಿದ್ಯಾನಿಲಯ

BENGALURU
CITY UNIVERSITY

Office of the Registrar, Central College Campus, Dr. B.R. Ambedkar Veedhi, Bengaluru – 560 001.
PhNo.080-22131385, E-mail: registrarbcu@gmail.com

ಸಂಖ್ಯೆ: ಬೆಂ.ನ.ವಿ/ ಎಸ್‌ವೈಎನ್ / ಅಸಾಮಾನ್ಯ ಸಭೆ/ 149 / 2021–22 ದಿನಾಂಕ: 01.09.2021.

ಗೆ,

ಮಾನ್ಯ ಸಿಂಡಿಕೇಟ್ ಸದಸ್ಯರು,
ಬೆಂಗಳೂರು ನಗರ ವಿಶ್ವವಿದ್ಯಾನಿಲಯ,
ಬೆಂಗಳೂರು

ಮಾನ್ಯರೆ,

**ವಿಷಯ: ದಿನಾಂಕ: 26.08.2021 ರಂದು ಜರುಗಿದ ಸಿಂಡಿಕೇಟ್ ಅಸಾಮಾನ್ಯ ಸಭೆಯ ನಡವಳಿಗಳು.**

***

ದಿನಾಂಕ: **26.08.2021** ರಂದು ಪೂರ್ವಾಹ್ನ 11:00 ಗಂಟೆಗೆ ಜರುಗಿದ ಸಿಂಡಿಕೇಟ್ ಅಸಾಮಾನ್ಯ ಸಭೆಯ ನಡವಳಿಗಳನ್ನು ಮಾನ್ಯ ಕುಲಪತಿಗಳು ಅನುಮೋದಿಸಿದಂತೆ, ಬೆಂಗಳೂರು ವಿಶ್ವವಿದ್ಯಾಲಯದ ಪರಿನಿಯಮಾವಳಿ 5.16 ರನ್ವಯ ಕಳುಹಿಸುತ್ತಿದ್ದೇನೆ.

ನಡವಳಿಗಳನ್ನು ರವಾನಿಸಿದ ದಿನಾಂಕದಿಂದ ಏಳು ದಿನಗಳೊಳಗಾಗಿ ಸಭೆಯಲ್ಲಿ ಹಾಜರಿದ್ದ ಸದಸ್ಯರು, ನಡವಳಿಗಳ ಬಗ್ಗೆ ಯಾವುದೇ ಆಕ್ಷೇಪಣೆಯನ್ನು ಕಳುಹಿಸದಿದ್ದಲ್ಲಿ, ಮೇಲೆ ಹೇಳಿದ ಪರಿನಿಯಮಾವಳಿಗಳ ಅನುಸಾರ ಅವುಗಳನ್ನು ಸ್ಥಿರೀಕರಿಸಲಾಗಿದೆ ಎಂದು ಪರಿಗಣಿಸಲಾಗುವುದು.

ವಂದನೆಗಳೊಂದಿಗೆ,

ತಮ್ಮ ವಿಶ್ವಾಸಿ,

ಕುಲಸಚಿವರು

ಅಡಕ: ಮೇಲಿನಂತೆ

ಪ್ರತಿಗಳು:

1. ರಾಜ್ಯಪಾಲರ ಕಾರ್ಯದರ್ಶಿಗಳು, ರಾಜಭವನ, ಬೆಂಗಳೂರು – 560 001.
2. ಪ್ರಧಾನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯ), ಕರ್ನಾಟಕ ಸರ್ಕಾರ, ಬೆಂಗಳೂರು–1.
3. ಕುಲಪತಿಗಳು, ಕುಲಸಚಿವರು, ಕುಲಸಚಿವರು (ಮೌಲ್ಯಮಾಪನ), ವಿತ್ತಾಧಿಕಾರಿಗಳ ಆಪ್ತ ಕಾರ್ಯದರ್ಶಿಗಳಿಗೆ. ಬಿಸಿಯು.
4. ಕಛೇರಿ ಪ್ರತಿ / ರಕ್ಷಣಾ ಕಡತ

ಬೆಂಗಳೂರು ನಗರ ವಿಶ್ವವಿದ್ಯಾನಿಲಯ BENGALURU CITY UNIVERSITY
Office of the Registrar, Central College Campus, Dr. B.R. Ambedkar Veedhi, Bengaluru – 560 001.
Ph.No.080-22131385, E-mail: registrarbcu@gmail.com

ಸಂಖ್ಯೆ:ಬಿಸಿಯು/ಎಸ್‌ವೈಎನ್–13/ಅಸಾಮಾನ್ಯ ಸಭೆ/ /2021–22 ದಿನಾಂಕ: 01.09.2021

ದಿನಾಂಕ 26.08.2021 ರಂದು ಪೂರ್ವಾಹ್ನ 11.00 ಗಂಟೆಗೆ ಬೋರ್ಡ್‌ರೂಮ್, ಜ್ಞಾನಜ್ಯೋತಿ ಸಭಾಂಗಣ, ಅರಮನೆ ರಸ್ತೆ, ಬೆಂಗಳೂರು 560 001 ಇಲ್ಲಿ ಜರುಗಿದ ಸಿಂಡಿಕೇಟ್ ಅಸಾಮಾನ್ಯ ಸಭೆಯ ನಡವಳಿಗಳು.

**ಹಾಜರಾದ ಸದಸ್ಯರು:**

| | | |
|---|---|---|
| 1. | ಪ್ರೊ. ಲಿಂಗರಾಜ ಗಾಂಧಿ,<br>ಕುಲಪತಿಗಳು | ಸಭಾಧ್ಯಕ್ಷರು |
| 2. | ಡಾ.ವಿ.ಆರ್. ದೇವರಾಜ್, | ಸದಸ್ಯರು |
| 3. | ಪ್ರೊ. ಕೆ. ರಮೇಶ್ | ಸದಸ್ಯರು |
| 4. | ಡಾ: ಲಿಡಿಯಾ ಪಿ. ಸ್ಯಾಮುಯೆಲ್ | ಸದಸ್ಯರು |
| 5. | ಡಾ. ಪಿ. ವಿ. ಪದ್ಮಜಾ | ಸದಸ್ಯರು |
| 6. | ಪ್ರೊ. ಎಂ. ಚಿಕ್ಕಮುನಿಯಪ್ಪ | ಸದಸ್ಯರು |
| 7. | ಶ್ರೀ ಹೆಚ್.ಎನ್. ಹರಿಪ್ರಸಾದ | ಸದಸ್ಯರು |
| 8. | ಶ್ರೀಮತಿ ಜ್ಯೋತಿ ವಿಜಯ್ | ಸದಸ್ಯರು |
| 9. | ಶ್ರೀ ಟಿ.ಹೆಚ್. ಶ್ರೀನಿವಾಸಯ್ಯ | ಸದಸ್ಯರು |
| 10. | ಶ್ರೀ ಥಾಮಸ್ ನೀಲಿಯಾರ | ಸದಸ್ಯರು |
| 11. | ಡಾ. ವಿ. ಗಾಯತ್ರಿ | ಸದಸ್ಯರು |
| 12 | ಶ್ರೀ. ಜಿ.ಕೆ. ಶ್ರೀರಾಮ, ಉಪ ನಿರ್ದೇಶಕರು<br>ಪದವಿ ಪೂರ್ವ ಶಿಕ್ಷಣ ಇಲಾಖೆ ನಿರ್ದೇಶಕರ ಪರವಾಗಿ | ಸದಸ್ಯರು |
| 12. | ಪ್ರೊ. ಬಿ. ರಮೇಶ್,<br>ಕುಲಸಚಿವರು (ಮೌಲ್ಯಮಾಪನ) | ಸದಸ್ಯರು |
| 13. | ಶ್ರೀ.ಸಿ.ಎನ್. ಶ್ರೀಧರ,ಕೆ.ಎ.ಎಸ್. (ಹಿರಿಯ ಶ್ರೇಣಿ)<br>ಕುಲಸಚಿವರು | ಸದಸ್ಯ ಕಾರ್ಯದರ್ಶಿಗಳು |

ಸಭೆಯ ಪ್ರಾರಂಭದಲ್ಲಿ ಪ್ರೊ.ಬಿ. ರಮೇಶ್, ಕುಲಸಚಿವರು (ಮೌಲ್ಯಮಾಪನ) ರವರು ಸಭೆಯಲ್ಲಿ ಉಪಸ್ಥಿತರಿದ್ದ ಎಲ್ಲಾ ಸದಸ್ಯರಿಗೆ ಹಾಗೂ ಸಭಾಧ್ಯಕ್ಷರಿಗೆ ಸ್ವಾಗತ ಕೋರಿದರು. ನಂತರ ಕಾರ್ಯಸೂಚಿಯನ್ನು ಚರ್ಚೆಗೆ ತೆಗೆದುಕೊಂಡು ತೀರ್ಮಾನಿಸಲಾಯಿತು.

ವಿಷಯ ಸಂಖ್ಯೆ 1: **ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ಬಹುಶಿಸ್ತಿಯ ಮಹಿಳಾ ಘಟಕ ಕಾಲೇಜನ್ನು ಸರ್ಕಾರಿ ಬಾಲಕಿಯರ ಪದವಿ ಪೂರ್ವ ಕಾಲೇಜು ಆವರಣ, ಮಲ್ಲೇಶ್ವರಂ 13 ನೇ ಕ್ರಾಸ್, ಬೆಂಗಳೂರು, ಇಲ್ಲಿ ಪ್ರಾರಂಭಿಸುವ ಕುರಿತು**

ಕುಲಪತಿಗಳು ಕಾರ್ಯಸೂಚಿಯಲ್ಲಿರುವ ವಿಷಯದ ಕುರಿತು ಸವಿಸ್ತಾರವಾಗಿ ವಿವರಿಸಿ. ರಾಷ್ಟ್ರೀಯ ಶಿಕ್ಷಣ ನೀತಿ 2020ಯನ್ನು ಜಾರಿಗೆ ತರುವುದರಲ್ಲಿ ರಾಷ್ಟ್ರದಲ್ಲಿಯೇ ಪ್ರಥಮ ರಾಜ್ಯವಾಗಿ ಕರ್ನಾಟಕ ರಾಜ್ಯ ಹೊರಹೊಮ್ಮಿದೆ. ಸನ್ಮಾನ್ಯ ಉನ್ನತ ಶಿಕ್ಷಣ ಸಚಿವರ ಮುತುವರ್ಜಿ ಹಾಗೂ ವಿವಿಧ ಸಮಿತಿಗಳು ತಮ್ಮ ಜವಾಬ್ದಾರಿಯನ್ನು ಸಮರ್ಥವಾಗಿ ನಿರ್ವಹಿಸಿರುವುದು, ಕರ್ನಾಟಕ ಸರ್ಕಾರದ ಉನ್ನತ ಶಿಕ್ಷಣ ಇಲಾಖೆ ಮತ್ತು ಉನ್ನತ ಶಿಕ್ಷಣ ಪರಿಷತ್ತುಗಳ ಅವಿರತವಾದ ಪ್ರಯತ್ನ ಹಾಗೂ ಎಲ್ಲಾ ವಿಶ್ವವಿದ್ಯಾನಿಲಯಗಳ ಸಹಕಾರದಿಂದ ಇದು ಸಾಕಾರವಾಗಿದೆ ಎಂದು ಸಭೆಗೆ ತಿಳಿಸಿದರು. ದಿನಾಂಕ 25.08.2021 ರಂದು ಕೇಂದ್ರ ಶಿಕ್ಷಣ ಸಚಿವರಾದ ಶ್ರೀ ಧರ್ಮೇಂದ್ರ ಪ್ರಧಾನ, ರವರ ಉಪಸ್ಥಿತಿಯಲ್ಲಿ ರಾಜ್ಯದ ಉನ್ನತ ಶಿಕ್ಷಣ ಸಚಿವರಾದ ಡಾ. ಅಶ್ವಥನಾರಾಯಣರವರ ಅಧ್ಯಕ್ಷತೆಯಲ್ಲಿ ವಿಧಾನಸೌಧದ ಬ್ಯಾಂಕ್ವೆಟ್ ಹಾಲ್ ನಲ್ಲಿ ಜರುಗಿದ ಸಮಾರಂಭದಲ್ಲಿ ಸನ್ಮಾನ್ಯ ಮುಖ್ಯಮಂತ್ರಿಗಳು ಕರ್ನಾಟಕ ರಾಜ್ಯದಲ್ಲಿ 2021–22 ನೇ ಶೈಕ್ಷಣಿಕ ವರ್ಷದಿಂದ ರಾಷ್ಟ್ರೀಯ ಶಿಕ್ಷಣ ನೀತಿಗೆ ಚಾಲನೆ ನೀಡಿರುತ್ತಾರೆ.

ರಾಷ್ಟ್ರೀಯ ಶಿಕ್ಷಣ ನೀತಿ 2020 ಯ ಆಶೋತ್ತರಗಳಂತೆ, ಪ್ರತಿಯೊಂದು ವಿಶ್ವವಿದ್ಯಾನಿಲಯ ತನ್ನದೇ ಆದ ಘಟಕ ಮಹಾವಿದ್ಯಾಲಯ ಹೊಂದಿರುವುದು ಅಗತ್ಯವಾಗಿರುವುದನ್ನು ಮನಗಂಡು ರಾಜ್ಯ ಸರ್ಕಾರ ನಗರದ ಮಲ್ಲೇಶ್ವರಂ 13 ನೇ ಕ್ರಾಸ್‌ನಲ್ಲಿರುವ ಸರ್ಕಾರಿ ಬಾಲಕಿಯರ ಪದವಿ ಪೂರ್ವ ಮಹಾವಿದ್ಯಾಲಯದ ಆವರಣದಲ್ಲಿ ನೂತನವಾಗಿ ನಿರ್ಮಿಸಿರುವ ಕಟ್ಟಡವನ್ನು ವಿಶ್ವವಿದ್ಯಾನಿಲಯಕ್ಕೆ ನೀಡಿ ಬಹುಶಿಸ್ತಿಯ ಘಟಕ ಮಹಿಳಾ ಮಹಾವಿದ್ಯಾಲಯನ್ನು ಪ್ರಾರಂಭಿಸಲು ಅನುಮತಿ ನೀಡಿರುವ ವಿಷಯವನ್ನು ಸಭೆಗೆ ತಿಳಿಸಿದರು. ಇದೇ ಶೈಕ್ಷಣಿಕ ವರ್ಷದಿಂದ ಸದರಿ ಮಹಾವಿದ್ಯಾಲಯವನ್ನು ಪ್ರಾರಂಭಿಸಲು ಹಾಗೂ ಈ ಉದ್ದೇಶಕ್ಕಾಗಿ ಅಗತ್ಯವಾದ ಅನುದಾನವನ್ನು ವಿಶ್ವವಿದ್ಯಾನಿಲಯದ ಆಂತರಿಕ ಸಂಪನ್ಮೂಲಗಳಿಂದ ಭರಿಸುವಂತೆ ತಿಳಿಸಿ ತಾತ್ಕಾಲಿಕ ವ್ಯವಸ್ಥೆಯಡಿ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳನ್ನು ನೇಮಕ ಮಾಡಿಕೊಳ್ಳವಂತೆ ಮತ್ತು ಹುದ್ದೆಗಳ ಸೃಜನೆ, ನೇಮಕಾತಿ ಹಾಗೂ ಅವಶ್ಯಕ ಅನುದಾನಕ್ಕಾಗಿ ಮುಂದಿನ ಆರ್ಥಿಕ ವರ್ಷದಲ್ಲಿ ಪ್ರಸ್ತಾವನೆ ಸಲ್ಲಿಸುವಂತೆ ಸರ್ಕಾರ ಸೂಚಿಸಿರುತ್ತದೆ ಎಂದು ತಿಳಿಸಿದರು.

ರಾಷ್ಟ್ರೀಯ ಶಿಕ್ಷಣ ನೀತಿಗೆ ಅನುಗುಣವಾಗಿ ವಿಶ್ವವಿದ್ಯಾನಿಲಯಗಳು ಬಹುಶಿಸ್ತಿಯ ಘಟಕ ಮಹಿಳಾ ಕಾಲೇಜು ಪ್ರಾರಂಭಿಸುವ ಪ್ರಥಮ ಅವಕಾಶ ನಮ್ಮ ವಿಶ್ವವಿದ್ಯಾನಿಲಯಕ್ಕೆ ದೊರಕಿದೆ ಅದನ್ನು ಸದುಪಯೋಗ ಪಡಿಸಿಕೊಂಡು ಬಹುಶಿಸ್ತಿಯ ಮಾದರಿ ಮಹಿಳಾ ಮಹಾವಿದ್ಯಾಲಯವನ್ನು ಪ್ರಾರಂಭಿಸಲು ಸದಸ್ಯರ ಸಹಕಾರ ಕೋರಿದರು. ಸರ್ಕಾರಕ್ಕೆ ಸಲ್ಲಿಸಿರುವ ಪ್ರಸ್ತಾವನೆಯಲ್ಲಿರುವ ಎಲ್ಲಾ ಕೋರ್ಸು ಮತ್ತು ವಿಷಯಗಳನ್ನು ಪ್ರಾರಂಭ ಮಾಡಲು ಸಾಧ್ಯವಾಗುವದಿಲ್ಲ ಹಾಗಾಗಿ ಕಲಾ, ವಿಜ್ಞಾನ ಮತ್ತು ವಾಣಿಜ್ಯ ವಿಭಾಗಗಳಲ್ಲಿ ಕೆಲವು ಪದವಿ ಕೋರ್ಸುಗಳು ಮೌಲ್ಯಾಧಾರಿತ, ಕೌಶಲ್ಯಾಭಿವೃದ್ಧಿಗೆ ಸಂಬಂಧಿಸಿದಂತೆ ಕೆಲವು ವಿಷಯಗಳ ಪದವಿ, ಸರ್ಟಿಫಿಕೇಟ್ ಮತ್ತು ಡಿಪ್ಲೋಮ ಕೋರ್ಸುಗಳನ್ನು ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು. ಸರ್ಕಾರ ಸೂಚಿಸಿದಂತೆ, ಪ್ರಸ್ತುತ ಹಣಕಾಸಿನ ವರ್ಷದ ಉಳಿದ ಅವಧಿಗೆ ಅಗತ್ಯವಾದ ವೆಚ್ಚವನ್ನು ವಿಶ್ವವಿದ್ಯಾನಿಲಯದ ಆಯವ್ಯಯದಲ್ಲಿ ಅವಕಾಶ ಕಲ್ಪಿಸಿರುವ ಸಂಪನ್ಮೂಲದಿಂದ ಭರಿಸಲು, ಮುಂದಿನ ವರ್ಷದ ಆಯವ್ಯಯದಲ್ಲಿ ಈ ಮಹಾವಿದ್ಯಾಲಯಕ್ಕೆ ಪ್ರತ್ಯೇಕವಾದ ಆಯವ್ಯಯದ ಅವಕಾಶ ಕಲ್ಪಿಸಲಾಗುವುದು ಎಂದು ತಿಳಿಸಿ, ಈ ಕುರಿತು ಸರ್ಕಾರಕ್ಕೆ ವಿವರವಾದ ಪ್ರಸ್ತಾವನೆ ಸಲ್ಲಸಲಾಗುವುದು, ಪ್ರವೇಶ ಪ್ರಕ್ರಿಯೆಗಳನ್ನು ಕೂಡಲೆ ಪ್ರಾರಂಭಿಸಬೇಕಾಗಿರುವುದರಿಂದ ಸದಸ್ಯರು ತಮ್ಮ ಅಭಿಪ್ರಾಯ ವ್ಯಕ್ತಪಡಿಸಿ ಅನುಮೋದನೆ ನೀಡುವಂತೆ ಕೋರಿದರು.

ಮಾನ್ಯ ಸದಸ್ಯಸರುಗಳು ಚರ್ಚೆಯಲ್ಲಿ ಭಾಗವಹಿಸಿ, (ಶ್ರೀ ಹೆಚ್. ಎನ್. ಹರಿಪ್ರಸಾದ, ಡಾ. ವಿ.ಆರ್. ದೇವರಾಜ್, ಡಾ. ಕೆ. ರಮೇಶ್, ಡಾ. ಲಿಡಿಯಾ ಸ್ಯಾಮುವೆಲ್, ಡಾ. ಜ್ಯೋತಿ ವಿಜಯ್, ಶ್ರೀ ಶ್ರೀನಿವಾಸಯ್ಯ ಮುಂತಾದವರು) ಸರ್ಕಾರದ ತೀರ್ಮಾನ ಸ್ತುತ್ಯಾರ್ಹವಾಗಿದ್ದು, ಇದು ವಿಶ್ವವಿದ್ಯಾನಿಲಯದ ಅಭಿವೃದ್ಧಿಯಲ್ಲಿ ಒಂದು ಮೈಲಿಗಲ್ಲಾಗುವುದು ಎಂದು ತಿಳಿಸಿದರು. ಈ ಮಹಾವಿದ್ಯಾಲಯ ಪ್ರಾರಂಭಿಸಲು ಆಸಕ್ತಿ ವಹಿಸಿದ ಉನ್ನತ ಶಿಕ್ಷಣ ಸಚಿವರಾದ ಸನ್ಮಾನ್ಯ ಡಾ: ಅಶ್ವಥನಾರಾಯಣರವರ ಅವಿರತ ಪ್ರಯತ್ನದ ಫಲವಾಗಿ ಇದು ಸಾಕಾರವಾಗಿದೆ ಎಂದು ತಿಳಿಸಿ ಅವರಿಗೆ ಅಭಿವಂದನೆಗಳನ್ನು ಸಲ್ಲಿಸಿ ಧನ್ಯವಾದಗಳನ್ನು ತಿಳಿಸಲು ಸಿಂಡಿಕೇಟ್ ಸಭೆ ನಿರ್ಣಯಿಸಬೇಕೆಂದು ಪ್ರಸ್ತಾಪಿಸಿದರು. ಈ ಮಹಿಳಾ ಘಟಕ ಮಹಾವಿದ್ಯಾಲಯ ಪ್ರಾರಂಭಿಸಲು ಸಾಕಷ್ಟು ಹಣಕಾಸಿನ ಅಗತ್ಯವಿದ್ದು ಇದಕ್ಕಾಗಿ ಅಂದಾಜು ಮಾಡಿರುವ ವೆಚ್ಚವನ್ನು ಹೇಗೆ ಭರಿಸಲಾಗುವುದು ಹಾಗೂ ಪ್ರಾರಂಭಿಸುವ ಕೋರ್ಸುಗಳ ಕುರಿತು ಮಾನ್ಯ ಸದಸ್ಯರುಗಳು ಸ್ಪಷ್ಟನೆ ಬಯಸಿದರು. ಕುಲಸಚಿವರು (ಮೌಲ್ಯಮಾಪನ) ರವರು ವಿವರಗಳನ್ನು ನೀಡಿ, ಈಗಾಗಲೇ ಮಾನ್ಯ ಕುಲಪತಿಗಳು ಸಭೆಗೆ ವಿವರಿಸಿದಂತೆ, ಸರ್ಕಾರ ತಾತ್ಕಾಲಿಕ ವ್ಯವಸ್ಥೆಯಡಿಯಲ್ಲಿ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳನ್ನು ನೇಮಕ ಮಾಡಲು ಹಾಗೂ ಅಗತ್ಯವಾದ ವೆಚ್ಚವನ್ನು ವಿಶ್ವವಿದ್ಯಾನಿಲಯದ ಆಂತರಿಕ ಸಂಪನ್ಮೂಲದಿಂದ ಭರಿಸಲು ಅನುಮತಿಸಿರುವುದರಿಂದ, ಕೆಲವು ಕೋರ್ಸು ಮತ್ತು ವಿಷಯಗಳನ್ನು ಮಾತ್ರ

ಪ್ರಾರಂಭಿಸಲು ತೀರ್ಮಾನ ತೆಗೆದುಕೊಳ್ಳಬಹುದು. ಅಗತ್ಯವಾದ ಶಿಕ್ಷಕರನ್ನು, ವಿಶ್ವವಿದ್ಯಾನಿಲಯದ ವಿವಿಧ ವಿಭಾಗಗಳಿಗೆ ನೇಮಕ ಮಾಡುವ ಅತಿಥಿ ಉಪನ್ಯಾಸಕರ ಮಾದರಿಯಲ್ಲಿಯೇ ಈ ಬಹುಶಿಸ್ತಿಯ ಘಟಕ ಮಹಿಳಾ ಮಹಾವಿದ್ಯಾಲಯಕ್ಕೆ ನೇಮಕ ಮಾಡಬಹುದು. ಅತಿಥಿ ಉಪನ್ಯಾಸಕರ ಸಂಭಾವನೆ ಪಾವತಿಗೆ ಆಯವ್ಯಯದಲ್ಲಿ ಅವಕಾಶ ಕಲ್ಪಿಸಿದ್ದು ಅದರಲ್ಲಿ ಉಳಿಕೆಯಾಗುವ ಮೊತ್ತದಿಂದ ಈ ವೆಚ್ಚವನ್ನು ಭರಿಸಬಹುದು, ಮೂಲಭೂತ ಸೌಕರ್ಯಗಳಿಗೂ ಸಹ ಆಯವ್ಯಯದಲ್ಲಿ ಅವಕಾಶವಿದ್ದು, ಅದರಲ್ಲಿ ಕೂಡ ವೆಚ್ಚ ಕಡಿಮೆಯಾಗಿದ್ದು, ಅದರಿಂದ ಮೂಲ ಸೌಕರ್ಯಗಳನ್ನು ಒದಗಿಸಬಹುದು. ಹೆಚ್ಚಿನ ಹಣಕಾಸಿನ ಅಗತ್ಯವಾದರೆ, ಪರಿಷ್ಕೃತ ಆಯವ್ಯಯ ಸಿದ್ಧಪಡಿಸಿ ಮರು ವಿನಿಯೋಗಕ್ಕಾಗಿ ಸಿಂಡಿಕೇಟ್ ಸಭೆಯ ಅನುಮೋದನೆಗಾಗಿ ಮಂಡಿಸಲಾಗುವುದು. ರಾಷ್ಟ್ರೀಯ ಶಿಕ್ಷಣ ನೀತಿಗೆ ಅನುಗುಣವಾಗಿ ಕೋರ್ಸು ಮಾದರಿ ಪಠ್ಯಕ್ರಮ ಇತ್ಯಾದಿಗಳನ್ನು ರಾಜ್ಯ ಉನ್ನತ ಶಿಕ್ಷಣ ಪರಿಷತ್ತು ಸಿದ್ಧಪಡಿಸುತ್ತಿದ್ದು ಅದು ಅಂತಿಮ ಹಂತದಲ್ಲಿದೆ, ಅವುಗಳು ಅಂತಿಮಗೊಂಡ ನಂತರ ಇನ್ನಷ್ಟು ಸ್ಪಷ್ಟತೆ ಸಿಗುತ್ತದೆ. ಒಟ್ಟಾರೆಯಾಗಿ ರಾಷ್ಟ್ರೀಯ ಶಿಕ್ಷಣ ನೀತಿಯ 2020 ಮೂಲ ಆಶಯದಂತೆ ಬಹುಶಿಸ್ತಿಯ ಸಮಗ್ರ ಶಿಕ್ಷಣ ವ್ಯವಸ್ಥೆಯನ್ನು ಜಾರಿಗೆ ತರಲು ವಿಶ್ವವಿದ್ಯಾನಿಲಯ ಎಲ್ಲಾ ಕ್ರಮಗಳನ್ನು ತೆಗೆದುಕೊಳ್ಳುವುದು ಎಂದು ಸಭೆಗೆ ತಿಳಿಸಿದರು.

ಕುಲಸಚಿವರು ತಮ್ಮ ಅಭಿಪ್ರಾಯಗಳನ್ನು ವ್ಯಕ್ತಪಡಿಸಿ, ಸರ್ಕಾರ ಈ ವಿಶ್ವವಿದ್ಯಾನಿಲಯಕ್ಕೆ ಘಟಕ ಮಹಿಳಾ ಮಹಾವಿದ್ಯಾಲಯ ಹೊಂದುವ ಅವಕಾಶ ಕಲ್ಪಿಸಿದ್ದು, ಇದನ್ನು ಸದುಪಯೋಗ ಪಡಿಸಿಕೊಳ್ಳುವ ಜವಾಬ್ದಾರಿ ನಮ್ಮ ಮೇಲಿದೆ. ಇದನ್ನು ಸಾಕಾರಗೊಳಿಸಲು ಸಾಕಷ್ಟು ಸವಾಲುಗಳನ್ನು ಎದುರಿಸಬೇಕಾಗುತ್ತದೆ. ಎಲ್ಲಾ ಮಾನ್ಯ ಸದಸ್ಯರ ಸಹಕಾರದಿಂದ ಅವುಗಳನ್ನು ನಿವಾರಿಸಿ ಈ ಘಟಕ ಮಹಿಳಾ ಮಹಾವಿದ್ಯಾಲಯವನ್ನು ಪ್ರಾರಂಭಿಸಲು ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು ಎಂದು ಹೇಳಿದರು. ನೇಮಕಾತಿ ಕುರಿತಂತೆ ಸರ್ಕಾರ ಕಾಲಕಾಲಕ್ಕೆ ಹೊರಡಿಸಿರುವ ಆದೇಶ ನಿರ್ದೇಶನಗಳನ್ನು ಪಾಲಿಸಬೇಕಾಗುತ್ತದೆ ಎಂದು ತಿಳಿಸಿದರು.

ಕೆಲವು ಸದಸ್ಯರು ಬೋಧಕೇತರ ಸಿಬ್ಬಂದಿಗಳ ನೇಮಕದ ವಿಧಿ ವಿಧಾನ ಹಾಗೂ ಈ ಕುರಿತು ರಚಿಸಿರುವ ಸ್ಥಾಯಿ ಸಮಿತಿಯ ಕುರಿತು ಪ್ರಸ್ತಾಪಿಸಲು, ಕುಲಪತಿಗಳು ವಿವರಣೆ ನೀಡಿ, ಯಾವುದಾದರೂ ಒಂದು ನಿರ್ದಿಷ್ಟ ಪ್ರಕರಣ ಕುರಿತಂತೆ ಪರಿಶೀಲಿಸಲು ಸಿಂಡಿಕೇಟ್ ಉಪ ಸಮಿತಿ ರಚಿಸಲು ನಿಯಮಾವಳಿಗಳಲ್ಲಿ ಅವಕಾಶವಿದೆ. ಸ್ಥಾಯಿ ಸಮಿತಿಗಳು ಶಾಶ್ವತ ಸ್ವರೂಪ ಪಡೆಯುವುದರಿಂದ ನಿಯಮಗಳಲ್ಲಿ ಅಂಥಹ ಸಮಿತಿಗಳಿಗೆ ಅವಕಾಶವಿಲ್ಲವೆಂದು ತಿಳಿಸಿ, ಪ್ರಸ್ತುತ ಸಭೆಯ ಮುಂದಿರುವ ವಿಷಯ ಕುರಿತು ಪರಿಶೀಲಿಸಿ ತೀರ್ಮಾನಿಸಬೇಕೆಂದು ಹೇಳಿದರು.

ಸುದೀರ್ಘ ಚರ್ಚೆಯ ನಂತರ, ಸಿಂಡಿಕೇಟ್ ಸಭೆ ಕೆಳಗಿನ ತೀರ್ಮಾನಗಳನ್ನು ತೆಗೆದುಕೊಂಡಿತು:

ಸಿಂಡಿಕೇಟ್ ನಿರ್ಣಯ:

i. ಬೆಂಗಳೂರು ನಗರದ ಮಲ್ಲೇಶರಂ 13 ನೇ ಕ್ರಾಸ್‌ನಲ್ಲಿರುವ ಸರ್ಕಾರಿ ಬಾಲಕಿಯರ ಪದವಿ ಪೂರ್ವ ಕಾಲೇಜು ಆವರಣದಲ್ಲಿರುವ ನೂತನ ಕಟ್ಟಡದಲ್ಲಿ, ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ಬಹುಶಿಸ್ತಿಯ ಘಟಕ ಮಹಿಳಾ ಕಾಲೇಜನ್ನು 2021–22ನೇ ಸಾಲಿನಿಂದ ಪ್ರಾರಂಭಿಸಲು ಅನುಮೋದನೆ ನೀಡಲಾಯಿತು..

ii. ವಿಶ್ವವಿದ್ಯಾನಿಲಯದ ವಿವಿಧ ಸ್ನಾತಕೋತ್ತರ ವಿಭಾಗಗಳಿಗೆ ಬೋಧಕ ಸಿಬ್ಬಂದಿಗಳನ್ನು ನೇಮಕ ಮಾಡುವ ವಿಧಿ ವಿಧಾನಗಳನ್ವಯ ಸದರಿ ಬಹುಶಿಸ್ತಿಯ ಘಟಕ ಮಹಿಳಾ ಕಾಲೇಜಿಗೆ ಅಗತ್ಯವಾದ ಅತಿಥಿ ಉಪನ್ಯಾಸಕರನ್ನು ಪ್ರಸ್ತುತ ವರ್ಷದ ಆಯವ್ಯಯದಲ್ಲಿ ಅತಿಥಿ ಉಪನ್ಯಾಸಕರ ಲೆಕ್ಕ ಶೀರ್ಷಿಕೆ ಅಡಿಯಲ್ಲಿ ಭರಿಸಿ ನೇಮಕ ಮಾಡಿಕೊಳ್ಳಲು ಸಿಂಡಿಕೇಟ್ ಸಭೆಯು ಅನುಮೋದನೆ ನೀಡಿತು.

iii. ಅಗತ್ಯವಾದ ಬೋಧಕೇತರ ಸಿಬ್ಬಂದಿಗಳನ್ನು ನಿಯಮಾನುಸಾರ ಪ್ರಸ್ತುತ ವರ್ಷದ ಆಯವ್ಯಯದಲ್ಲಿ ತಾತ್ಕಾಲಿಕ ಸಿಬ್ಬಂದಿಗಳ ಸಂಬಳ ಪಾವತಿ ಲೆಕ್ಕ ಶೀರ್ಷಿಕೆ ಅಡಿಯಲ್ಲಿ ಭರಿಸಿ ನೇಮಕ ಮಾಡಿಕೊಳ್ಳಲು ಸಿಂಡಿಕೇಟ್ ಸಭೆಯು ಅನುಮೋದನೆ ನೀಡಿತು.

iv. ಪ್ರಥಮ ಹಂತದಲ್ಲಿ, ಕಲಾ, ವಾಣಿಜ್ಯ ಮತ್ತು ವಿಜ್ಞಾನ ವಿಭಾಗಗಳಲ್ಲಿ ತ್ವರಿತವಾಗಿ ಮೂಲ ಸೌಕರ್ಯಗಳನ್ನು ಒದಗಿಸಲು ಸಾಧ್ಯವಾಗುವ ವಿಷಯಗಳನ್ನು ಹಾಗೂ ಮೌಲ್ಯವರ್ಧಿತ-ಕೌಶಲ್ಯಾಧಾರಿತ ವಿಷಯಗಳ ವ್ಯಾಸಂಗ ಕ್ರಮಗಳನ್ನು 2021–22 ನೇ ಶೈಕ್ಷಣಿಕ ವರ್ಷದಿಂದ ಪ್ರಾರಂಭಿಸಲು ಸಭೆಯು ಅನುಮೋದನೆ ನೀಡಿತು.

v. ವಿಶ್ವವಿದ್ಯಾನಿಲಯದ ಘಟಕ ಮಹಿಳಾ ಕಾಲೇಜಿಗೆ ಅಗತ್ಯವಾದ ಮೂಲ ಸೌಕರ್ಯ, ಪೀಠೋಪಕರಣ, ಗಣಕಯಂತ್ರ, ಗ್ರಂಥಾಲಯದ ಅಗತ್ಯತೆ ಇತ್ಯಾದಿಗಳನ್ನು, ಪ್ರಸ್ತುತ 2021–22 ನೇ ಸಾಲಿನ ಆಯವ್ಯಯದಲ್ಲಿ ಆಯಾ ಲೆಕ್ಕ ಶೀರ್ಷಿಕೆಗಳಲ್ಲಿ ಲಭ್ಯವಿರುವ ಅನುದಾನದ ಅಡಿಯಲ್ಲಿ ನಿಯಮಾನುಸಾರ ಖರೀದಿಸಲು ಸಭೆ ಒಪ್ಪಿಗೆ ನೀಡಿತು.

ಇತರ ವಿಷಯಗಳು:

ಸಭೆಯ ಅಂತ್ಯದಲ್ಲಿ, ಮಾನ್ಯ ಸದಸ್ಯರಾದ ಶ್ರೀ ಹೆಚ್.ಎನ್. ಹರಿಪ್ರಸಾದ ಹಾಗೂ ಇತರ ಸದಸ್ಯರು ಅಧ್ಯಕ್ಷರ ಅನುಮತಿ ಪಡೆದು ಎಂ.ಎಸ್ಸಿ. ಭೌತಶಾಸ್ತ್ರ ವಿಭಾಗದ ವಿದ್ಯಾರ್ಥಿಗಳ ಆಂತರಿಕ ಅಂಕಗಳ ಕುರಿತಂತೆ, ವಿದ್ಯಾರ್ಥಿಗಳ ಸಮಸ್ಯೆಗಳನ್ನು ಸಭೆಯ ಗಮನಕ್ಕೆ ತಂದು, ಆಂತರಿಕ ಅಂಕಗಳನ್ನು ನೀಡುವಲ್ಲಿ ಆಗಿರುವ ವ್ಯತ್ಯಾಸ ಕುರಿತಂತೆ ಪ್ರಸ್ತಾಪಿಸಿದರು. ಕೋವಿಡ್–19 ಸಾಂಕ್ರಾಮಿಕತೆಯ ಹಿನ್ನೆಲೆಯಲ್ಲಿ ವಿದ್ಯಾರ್ಥಿಗಳು ಅಸೈನ್‌ಮೆಂಟ್ ಸಲ್ಲಿಸದೇ ಇರುವುದರಿಂದ ಅವರಿಗೆ ಅಂಕಗಳು ನೀಡಿರುವದಿಲ್ಲವಾದ್ದರಿಂದ ಈ ಸಮಸ್ಯೆ ಉದ್ಭವಿಸಿದೆ ಎಂದು ಹೇಳಿದರು.

ಕುಲಸಚಿವರು (ಮೌಲ್ಯಮಾಪನ) ರವರು ಸಭೆಗೆ ವಿವರ ನೀಡಿ, ಇದೇ ರೀತಿಯು ಪ್ರಕರಣ ಮಹಾರಾಣಿ ಮಹಾವಿದ್ಯಾಲಯದಲ್ಲಿ ಸಹ ಆಗಿದೆ. ಇದೊಂದು ವಿಶೇಷ ಪ್ರಕರಣವಾಗಿದ್ದು, ಆಂತರಿಕ ಅಂಕಗಳನ್ನು ಪಡೆಯದೇ ಈ ವಿದ್ಯಾರ್ಥಿಗಳು ಕೋರ್ಸು ಪಾಸು ಮಾಡುವ ಸಾಧ್ಯತೆ ಇಲ್ಲ. ಈ ಹಿಂದೆ ಇಂತಹ ಪ್ರಕರಣ ಜರುಗಿರುವುದಿಲ್ಲ. ಈ ಕುರಿತು ಸಭೆ ಕೂಲಂಕುಷವಾಗಿ ಪರಿಶೀಲಿಸಿ ತೀರ್ಮಾನ ತೆಗೆದುಕೊಳ್ಳಬೇಕೆಂದು ಹೇಳಿದರು.

ವಿಜ್ಞಾನ ನಿಕಾಯದ ಡೀನರು ಹಾಗೂ ಸಿಂಡಿಕೇಟ್ ಸದಸ್ಯರಾದ ಡಾ: ವಿ. ಆರ್. ದೇವರಾಜ್ ರವರು ಸಹ ಕೋವಿಡ್‌ನಿಂದಾಗಿ ಸಂವಹನದ ಕೊರತೆಯಿಂದ ಈ ಘಟನೆ ಜರುಗಿದೆ. ವಿದ್ಯಾರ್ಥಿಗಳ ಹಿತವನ್ನು ಗಮನದಲ್ಲಿಟ್ಟುಕೊಂಡು ತೀರ್ಮಾನ ತೆಗೆದುಕೊಳ್ಳಬೇಕೆಂದು ಸಭೆಗೆ ವಿನಂತಿಸಿದರು.

**ಸಿಂಡಿಕೇಟ್ ನಿರ್ಣಯ:**

**ಚರ್ಚೆಯ ನಂತರ ಈ ಕುರಿತು ಪರಿಶೀಲಿಸಿ ವರದಿ ಸಲ್ಲಿಸಲು ಸಿಂಡಿಕೇಟ್ ಸದಸ್ಯರಾದ ಪ್ರೊ. ಕೆ. ರಮೇಶ್ ರವರ ಏಕ ಸದಸ್ಯ ಸಮಿತಿ ರಚಿಸಲು, ಸದರಿ ಸಮಿತಿಯ ವರದಿಯ ಆಧಾರದ ಮೇಲೆ ಕುಲಪತಿಗಳು ಅಂತಿಮ ತೀರ್ಮಾನ ತೆಗೆದುಕೊಳ್ಳಬೇಕೆಂದು ಸಭೆ ತೀರ್ಮಾನಿಸಿತು.**

ಕುಲಸಚಿವರು (ಮೌಲ್ಯಮಾಪನ) ರವರ ವಂದನಾರ್ಪಣೆ ಹಾಗೂ ರಾಷ್ಟ್ರಗೀತೆಯೊಂದಿಗೆ ಸಭೆ ಮುಕ್ತಾಯವಾಯಿತು.

ಕುಲಸಚಿವರು
ಸದಸ್ಯ ಕಾರ್ಯದರ್ಶಿಗಳು

ಕುಲಪತಿಗಳು
ಸಭಾಧ್ಯಕ್ಷರು